ಆ) ನಗರದ ಮಧ್ಯದಲ್ಲಿ ಇರುವ ಕೆರೆಗಳನ್ನು ಉಳಿಸಿಕೊಂಡು ಉತ್ತಮ ಪರಿಸರ ನಿರ್ಮಿಸುವಲ್ಲಿ ಯಾವ ರೀತಿಯ ಯೋಜನೆ ಸಿದ್ಧಪಡಿಸಲಾಗಿದೆ ಎಂಬುದರ ಮಾಹಿತಿ ನೀಡುವುದು;

ಇ) ನಗರದಲ್ಲಿರುವ ಬಾವಿ ಹಾಗೂ ಬೋರ್‌ವೆಲ್‌ಗಳಲ್ಲಿ ಕುಡಿಯುವ ನೀರು ಲಭ್ಯವಾಗಬೇಕಾದರೆ ಕೆರೆಗಳ ಸಂರಕ್ಷಣೆ ಮಾಡಿ ಅಭಿವೃದ್ಧಿ ಪಡಿಸಲು ಸರ್ಕಾರ ಹಾಕಿಕೊಂಡಿರುವ ಕಾರ್ಯಯೋಜನೆಗಳ ವಿವರ ನೀಡುವುದು?

ಶ್ರೀ ಡಿ.ಕೆ. ಶಿವಕುಮಾರ್ (ನಗರಾಭಿವೃದ್ಧಿ ಸಚಿವರು) :

ಅ) ಇಲ್ಲ

ಆ) ಕೂಲಿಗಾಗಿ ಕಾಳು ಯೋಜನೆಯಡಿಯಲ್ಲಿ ಹುಬ್ಬಳ್ಳಿ–ಧಾರವಾಡ ಮಹಾನಗರ ವ್ಯಾಪ್ತಿಯ ಕೆರೆಗಳ ಹೂಳು ತೆಗೆಯುವ ಕಾಮಗಾರಿ ತೆಗೆದುಕೊಂಡು, ಕೆರೆಗಳನ್ನು ಉಳಿಸಿಕೊಳ್ಳುವುದಕ್ಕೆ ಹಾಗೂ ಉತ್ತಮ ಪರಿಸರ ನಿರ್ಮಿಸುವುದಕ್ಕೆ ಕ್ರಮ ಕೈಗೊಂಡಿದೆ.

ಇ) ನಗರದಲ್ಲಿಯ ಇನ್ನೂ ಕೆಲವು ಕರೆಗಳ ಹೂಳು ತೆಗೆದು ಮಳೆ ನೀರು ಸಂಗ್ರಹಿಸುವುದು ನೀರಿನ ಮಟ್ಟವನ್ನು ಹೆಚ್ಚಿಸುವುದು ಹಾಗೂ ಮಹಾನಗರ ಪಾಲಿಕೆಯು ಸಾರ್ವಜನಿಕ ಉದ್ಯಾನವನಗಳ ಖಿಲ್ಲಾ ಜಾಗೆಯಲ್ಲಿ ನೀರು ಇಂಗುವ ಇಂಗು ಬಾವಿಗಳನ್ನು ನಿರ್ಮಿಸಿ ಮಳೆ ನೀರನ್ನು ತಡೆಗಟ್ಟುವುದರಿಂದ ನೀರಿನ ಮಟ್ಟ ಹೆಚ್ಚಿಸುವುದು ಈ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ.

ರಾಜ್ಯದ ಆಡಳಿತದಲ್ಲಿ ಪಾರದರ್ಶಕತೆ ನೀಡುವುದು

2562(3373) ಶ್ರೀ ಬೆಲ್ಲದ್ ಚಂದ್ರಕಾಂತ್ ಗುರಪ್ಪ (ಧಾರವಾಡ) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಪಾರದರ್ಶಕ ಆಡಳಿತ ಜಾರಿಗೆ ತರಲು ಪ್ರತಿ ಇಲಾಖೆಯಲ್ಲಿ ಹಮ್ಮಿಕೊಳ್ಳಲಾಗಿರುವ ಕಾರ್ಯಕ್ರಮಗಳೇನು;

ಆ) ಭ್ರಷ್ಟಾಚಾರದ ನಿಯಂತ್ರಣಕ್ಕೆ ಈ ಪಾರದರ್ಶಕ ಆಡಳಿತ ಜಾರಿಯಿಂದ ಯಾವ ರೀತಿ ಅನುಕೂಲಗಳಾಗಲಿದೆ;

ಇ) ಪಾರದರ್ಶಕ ಆಡಳಿತ ಕುರಿತಂತೆ ಪ್ರಮುಖ ಅಂಶಗಳ ವಿವರ ನೀಡುವುದು;

ಈ) ಸರ್ಕಾರಿ ಸಿಬ್ಬಂದಿಗಳ ವರ್ಗಾವಣೆಯ ನೀತಿಯಲ್ಲಿ ಭ್ರಷ್ಟಾಚಾರ ತಡೆಗಟ್ಟಲು ಹಾಗೂ ಪಾರದರ್ಶಕತೆಗೆ ಯಾವ ರೀತಿಯ ಸುಧಾರಣಾ ಕ್ರಮ ತರಲಾಗಿದೆ?

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಗಳು) :

ಅ) ರಾಜ್ಯದಲ್ಲಿ ಪಾರದರ್ಶಕ ಆಡಳಿತ ಜಾರಿಗೆ ತರಲು ಕರ್ನಾಟಕ ಮಾಹಿತಿ ಪಡೆಯಲು ಹಕ್ಕು ಅಧಿನಿಯಮ 2000 (2000ರ ಕರ್ನಾಟಕ ಅಧಿನಿಯಮ ಸಂಖ್ಯೆ :28)ನ್ನು ದಿನಾಂಕ : 18/7/2002 ರಿಂದ ಮತ್ತು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಅಧಿನಿಯಮ 1999(2000ರ ಕರ್ನಾಟಕ ಅಧಿನಿಯಮ 29)ನ್ನು ದಿನಾಂಕ: 4.10.2000 ದಿಂದ ಜಾರಿಗೆ ತರಲಾಗಿದೆ ಇದು ಎಲ್ಲಾ ಇಲಾಖೆಗಳಿಗೆ ಅನ್ವಯ ಆಗುತ್ತದೆ.

ಆ) (ಅ) ದಲ್ಲಿ ನಮೂದಿಸಲ್ಪಟ್ಟ 2 ನಿಯಮಾವಳಿಗಳು ಸರಕಾರದ ಕಾರ್ಯಕ್ಷಮತೆಯಲ್ಲಿ ಬಹಳಷ್ಟು ಪಾರದರ್ಶಕತೆಯನ್ನು ಉಂಟುಮಾಡಲಿದೆ. ಆಡಳಿತದ ಬಗ್ಗೆ ಜನ ಸಾಮಾನ್ಯರಿಗೆ ಸೂಕ್ತ ತಿಳುವಳಿಕೆ ಇಲ್ಲದಿರುವುದು ಮತ್ತು ಸೂಕ್ತ ಮಾಹಿತಿ ದೊರೆಯದೆ ಹೋದಾಗ ಆಡಳಿತದಲ್ಲಿರುವವರು

ಭ್ರಷ್ಟಾಚಾರದಲ್ಲಿ ತೊಡಗುವ ಸಾಧ್ಯತೆಗಳಿದ್ದಾಗ್ಯೂ ಆಡಳಿತದಲ್ಲಿ ಪಾರದರ್ಶಕತೆಯನ್ನು ಜಾರಿಗೊಳಿಸುವ ಮೂಲಕ ಭ್ರಷ್ಟಾಚಾರವನ್ನು ಕಡಿಮೆ ಮಾಡಬಹುದು.

ಇ) ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪರದರ್ಶಕತೆ ನಿಯಮಗಳು 1999 ರಲ್ಲಿ ನಿಗದಿಪಡಿಸಿರುವಂತೆ ಸರಕಾರವು ತನ್ನ ಸರ್ವ ವಿಧದ ಖರೀದಿಗಳನ್ನು ಸಂಪೂರ್ಣ ಪಾರದರ್ಶಕತೆಗೆ ಅನುಗುಣವಾಗಿ ಮಾಡತಕ್ಕದ್ದು. ಕರ್ನಾಟಕ ಮಾಹಿತಿ ಪಡೆಯುವ ಹಕ್ಕು ಅಧಿನಿಯಮದಂತೆ ಪ್ರತಿಯೊಂದು ಸರಕಾರಿ ಕಛೇರಿಯು ತನ್ನ ಸಂಘಟನೆ, ಪ್ರಕಾರ್ಯಗಳು ಮತ್ತು ಕರ್ತವ್ಯದ ವಿವರಗಳನ್ನು ಹಾಗೂ ತೀರ್ಮಾನ ಕೈಗೊಳ್ಳುವಲ್ಲಿ ಅನುಸರಿಸಲಾಗುವ ಕಾರ್ಯವಿಧಾನಗಳನ್ನು ಸಾರ್ವಜನಿಕರ ಮಾಹಿತಿಗಾಗಿ ಪ್ರಕಟಿಸಬೇಕು. ಕೆಲವೊಂದು ವಿಶೇಷ ದಸ್ತಾವೇಜುಗಳನ್ನು ಹೊರತುಪಡಿಸಿ, ಸಾರ್ವಜನಿಕರು ಅಪೇಕ್ಷಿಸುವ ಮಾಹಿತಿ ದಸ್ತಾವೇಜುಗಳ ನಕಲು ಪ್ರತಿಗಳನ್ನು ನೀಡಬೇಕಾಗುತ್ತದೆ.

ಈ) ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 4 ಸೇನಾವ 2001 ದಿನಾಂಕ: 22.11.2001ರಲ್ಲಿ ಸರ್ಕಾರಿ ಸಿಬ್ಬಂದಿಗಳ ವರ್ಗಾವಣೆಯ ಹೊಸ ನೀತಿ ರೂಪಿಸಲಾಗಿದೆ.

ಶಿವಮೊಗ್ಗ ನಗರದಲ್ಲಿ ಕುಟುಂಬ ನ್ಯಾಯಾಲಯ ಪ್ರಾರಂಭಿಸುವ ಪ್ರಸ್ತಾವನೆ ಕುರಿತು

2563(3193) ಶ್ರೀ ಚಂದ್ರಶೇಖರಪ್ಪ ಹೆಚ್.ಎಂ (ಶಿವಮೊಗ್ಗ) : ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಶಿವಮೊಗ್ಗ ನಗರದಲ್ಲಿ ಹೊಸದಾಗಿ ಕುಟುಂಬ ನ್ಯಾಯಾಲಯ ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಈ ಕಾರ್ಯವು ಯಾವ ಹಂತದಲ್ಲಿರುತ್ತದೆ?

ಶ್ರೀ ಡಿ.ಬಿ. ಚಂದ್ರೇಗೌಡ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) :

ಅ) ಇಲ್ಲ

ಆ) ಉದ್ಭವಿಸುವುದಿಲ್ಲ.

ಶಿವಮೊಗ್ಗ ಜಿಲ್ಲಾ ಲೋಕ್ ಅದಾಲತ್‌ನಲ್ಲಿ ಬಗೆಹರಿಸಿದ ಪ್ರಕರಣಗಳು

2564(3194) ಶ್ರೀ ಚಂದ್ರಶೇಖರಪ್ಪ ಹೆಚ್.ಎಂ (ಶಿವಮೊಗ್ಗ) : ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) 2001 ರಿಂದ ಈವರೆಗೆ ಶಿವಮೊಗ್ಗ ಜಿಲ್ಲಾ ನ್ಯಾಯಾಲಯದ ವ್ಯಾಪ್ತಿಯಲ್ಲಿರುವ ಲೋಕ್ ಅದಾಲತ್ ಮೂಲಕ ಇತ್ಯರ್ಥಗೊಳಿಸಲಾದ ಪ್ರಕರಣಗಳ ಸಂಖ್ಯೆ ಎಷ್ಟು; ವಿವರ ಒದಗಿಸುವುದು;

ಶ್ರೀ ಡಿ.ಬಿ. ಚಂದ್ರೇಗೌಡ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) :

ಅ)

ವರ್ಷ	ಇತ್ಯರ್ಥಗೊಳಿಸಲಾದ ಪ್ರಕರಣಗಳ ಸಂಖ್ಯೆ
1	2
2001	11,310
2002	5,261
2003	810
(ಜೂನ್ ಅಂತ್ಯದವರೆಗೆ)	ಒಟ್ಟು **17,381**